ಅ) *1996-97ನೇ ಸಾಲಿನಲ್ಲಿ ಉಡುಪಿ ವಿಧಾನ ಸಭಾ ಕ್ಷೇತ್ರಕ್ಕೆ ಮಂಜೂರಾಗಿರುವ ಪಶುವೈದ್ಯಕೀಯ ಆಸ್ಪತ್ರೆಗಳು ಎಷ್ಟು? ಇದಕ್ಕೆ ಎಷ್ಟು ವೈದ್ಯರು ಮತ್ತು ವೈದ್ಯೇತರುಗಳನ್ನು ನಿಯೋಜಿಸಲಾಗಿದೆ.*

ಆ) *ಮಂಜೂರಾಗದಿದ್ದಲ್ಲಿ ಕಾರಣಗಳೇನು?*

ಇ) *ಈ ಬಗ್ಗೆ ಸಾರ್ವಜನಿಕರಿಂದ ಸರ್ಕಾರಕ್ಕೆ ಪ್ರಸ್ತಾವನೆ ಬಂದಿರುವುದೇ?*

ಈ) *ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)*

ಶ್ರೀ ಬಿ.ಬಿ. ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು) :

ಅ) 1) ಯಾವುದು ಇಲ್ಲ

2) ಉದ್ಭವಿಸುವುದಿಲ್ಲ

ಆ) ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಇ) ಹೌದು

ಈ) ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಉಡುಪಿ ನ್ಯಾಯಾಧೀಶರಿಗೆ ವಸತಿ ಮತ್ತು ದೂರವಾಣಿ ಸೌಲಭ್ಯ

2630 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಉಡುಪಿ ನ್ಯಾಯಾಲಯಗಳ ನ್ಯಾಯಾಧೀಶರುಗಳಿಗೆ ವಸತಿ ಹಾಗೂ ದೂರವಾಣಿ ಸೌಲಭ್ಯ ಒದಗಿಸುವ ಪ್ರಸ್ತಾವನೆ ಹಾಗೂ ಉಡುಪಿ ನ್ಯಾಯಾಲಯಗಳ ಸಿಬ್ಬಂದಿ ವರ್ಗದವರಿಗೆ ವಸತಿ ಸೌಲಭ್ಯ ಒದಗಿಸುವ ಪ್ರಸ್ತಾವನೆಗಳು ಸರ್ಕಾರದವರ ಪರಿಶೀಲನೆಯಲ್ಲಿದೆಯೇ?*

ಆ) *ಈ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)*

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) 1) ಉಡುಪಿಯಲ್ಲಿ 4 ನ್ಯಾಯಾಧೀಶರುಗಳಿದ್ದು ಅವರೆಲ್ಲರಿಗೂ ನಾಮ ನಿರ್ದೇಶನ ವಸತಿ ಗೃಹಗಳನ್ನು ಒದಗಿಸಲಾಗಿದೆ.

2) ಉಡುಪಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯಕ್ಕೆ ದೂರವಾಣಿ ಸೌಲಭ್ಯ ಒದಗಿಸಲಾಗಿದೆ. ಇತರ ನ್ಯಾಯಾಲಯಕ್ಕೆ ಮತ್ತು ನ್ಯಾಯಾಧೀಶರ ವಸತಿ ಗೃಹಕ್ಕೆ ದೂರವಾಣಿ ಸೌಲಭ್ಯವನ್ನು ಒದಗಿಸುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.

3) ಉಡುಪಿ ನ್ಯಾಯಾಲಯದ ಸಿಬ್ಬಂದಿ ವರ್ಗದವರಿಗೆ ವಸತಿ ಸೌಲಭ್ಯ ಒದಗಿಸುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.